## ಕರ್ನಾಟಕ ಸರ್ಕಾರ

ಸಂ.ಕಂಇ/55/ಪ್ರಕಾ/2020

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿ.27.03.2020

## ಅಧಿಸೂಚನೆ

COVID -19 ಸಾಂಕ್ರಾಮಿಕ ರೋಗವನ್ನು ಪರಿಣಾಮಕಾರಿಯಾಗಿ ತಡೆಗಟ್ಟುವ ನಿಟ್ಟಿನಲ್ಲಿ ಕೇಂದ್ರ ಗೃಹ ಮಂತ್ರಾಲಯದ ಆದೇಶ ಸಂಖ್ಯೆ: 40-3/2020-DM-1(A), ದಿ.24.03.2020 ರಲ್ಲಿ ಹಾಗೂ ಆದೇಶ ಸಂಖ್ಯೆ: 40-3/2020-DM-1(A), ದಿ.25.03.2020ರಲ್ಲಿ ಕೇಂದ್ರ ಸರ್ಕಾರ ಹಾಗೂ ರಾಜ್ಯ ಸರ್ಕಾರಗಳು ಕೈಗೊಳ್ಳಬೇಕಾದ ಕ್ರಮಗಳ ಕುರಿತು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ. ಈ ಮಾರ್ಗಸೂಚಿಗಳನ್ನು ಸಂಬಂಧಪಟ್ಟ ಇಲಾಖೆಗಳ ಮೂಲಕ ಅನುಷ್ಠಾನಗೊಳಿಸಲು ಆದೇಶಿಸಲಾಗಿದೆ.

ಈ ಹಿನ್ನೆಲೆಯಲ್ಲಿ, ವಲಸೆ ಕಾರ್ಮಿಕರ, ವಲಸೆ ವಿದ್ಯಾರ್ಥಿಗಳ, ಪ್ರವಾಸಿಗರ ಚಲನ ವಲನ ಕಟ್ಟುನಿಟ್ಟಾಗಿ ನಿರ್ಭಂಧಿಸಲಾಗಿದೆ. ಇದರಿಂದ ಕೆಲವರಿಗೆ ಸಮಸ್ಯೆಗಳಾಗಿವೆ. ಅವುಗಳನ್ನು ಮಾರ್ಗಸೂಚಿಗಳನುಸಾರ ಪರಿಹರಿಸುವ ಅಗತ್ಯವಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕದ ಹಾಗೂ ಇತರ ರಾಜ್ಯಗಳ, ಇತರ ದೇಶಗಳ ವಲಸೆ ವಿದ್ಯಾರ್ಥಿಗಳ, ವಲಸೆ ಕಾರ್ಮಿಕರ, ಪ್ರವಾಸಿಗರ ಬಗ್ಗೆ ಮತ್ತು ಅವರಿಗೆ ಸಂಬಂಧಿಸಿದ ಸಮಸ್ಯೆಗಳ ಬಗ್ಗೆ ಪರಿಶೀಲಿಸಿ ಸೂಕ್ತ ಸಮನ್ವಯದೊಂದಿಗೆ ಮಾರ್ಗಸೂಚಿಗಳನುಸಾರ ಇತ್ಯರ್ಥಪಡಿಸಲು ಶ್ರೀ ಎನ್.ಮಂಜುನಾಥ ಪ್ರಸಾದ್, ಭಾ.ಆ.ಸೇ. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಕಂದಾಯ ಇಲಾಖೆ ಇವರನ್ನು ವಲಸಿಗರ ಸಮಸ್ಯೆಗಳ ನೋಡೆಲ್ ಅಧಿಕಾರಿಯನ್ನಾಗಿ ನೇಮಿಸಿ ಆದೇಶಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

**(ಟಿ.ಎಂ.ವಿಜಯ್ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ ಹಾಗೂ
ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರದ
ಕಾರ್ಯಕಾರಿ ಸಮಿತಿ ಅಧ್ಯಕ್ಷರು
ಕರ್ನಾಟಕ ಸರ್ಕಾರ

**ಗೆ,**
ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ–ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸಲು ಕಳುಹಿಸಿದೆ.

**ಪ್ರತಿ:**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು
2. ಶ್ರೀ ಎನ್. ಮಂಜುನಾಥ ಪ್ರಸಾದ್, ಭಾಆಸೇ., ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ
3. ಸರ್ಕಾರದ ಎಲ್ಲಾ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು

4. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು.
5. ಎಲ್ಲಾ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
5. ಸರ್ಕಾರದ ಉಪ ಕಾರ್ಯದರ್ಶಿ, ಸಿಆಸುಇ (ಸೇವೆಗಳು)
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಇವರ ಆಪ್ತ ಕಾರ್ಯದರ್ಶಿ.